# Akashvani : Bangalore
# Regional Bulletin In Kannada
# 25.07.2026 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ಕುಡಿಯುವ ನೀರು, ಜಾನುವಾರುಗಳಿಗೆ ಮೇವು, ಸಾರ್ವಜನಿಕರ ಆರೋಗ್ಯಕ್ಕೆ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸೂಚನೆ**

**೨. ನ್ಯಾನೊ ತಂತ್ರಜ್ಞಾನಕ್ಕೆ ಉತ್ತೇಜನ ; ಆಗಸ್ಟ್ ೩ರಿಂದ ೫ರವರೆಗೆ ಬೆಂಗಳೂರು ಇಂಡಿಯಾ ನ್ಯಾನೊ ಸಮಾವೇಶ**

**೩. ನೀಟ್ ವಿವಾದ ಹಿನ್ನೆಲೆ ; ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ**

**೪. ಹಾರಂಗಿ ಜಲಾಶಯ ಭರ್ತಿಯಾದ ಹಿನ್ನೆಲೆ ; ೪ ಸಾವಿರ ಕ್ಯೂಸೆಕ್ ನೀರು ನದಿಗೆ ಬಿಡುಗಡೆ**

**೫. ಮನ್ ಕಿ ಬಾತ್‌ನ ೧೩೬ನೇ ಆವೃತ್ತಿಯಲ್ಲಿ ನಾಳೆ ಪ್ರಧಾನಿ ನರೇಂದ್ರ ಮೋದಿ ಮನದ ಮಾತು**

**<><*<><>*><>**

ರಾಜ್ಯದಲ್ಲಿ ಜನಕೇಂದ್ರೀಯ ಆಡಳಿತ ತರಲು 'ಪ್ರಜಾಸೇವೆ ಇಲಾಖೆ' ಎಂಬ ನೂತನ ಇಲಾಖೆ ಪ್ರಾರಂಭಿಸಿರುವುದಾಗಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಚಿತ್ರದುರ್ಗದಲ್ಲಿ ಇಂದು ಬರ ಕುರಿತಂತೆ ಬೆಂಗಳೂರು ವಿಭಾಗ ಮಟ್ಟದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಾರ್ವಜನಿಕರ ಕುಂದುಕೊರತೆಗಳು ಮತ್ತು ಅಹವಾಲುಗಳನ್ನು ನೇರವಾಗಿ ಆಲಿಸಿ, ಕಾನೂನಿನ ಚೌಕಟ್ಟಿನಲ್ಲಿ ತಕ್ಷಣವೇ ಪರಿಹಾರ ಒದಗಿಸುವುದು ಈ ಇಲಾಖೆಯ ಮುಖ್ಯ ಉದ್ದೇಶ ಎಂದು ಹೇಳಿದ್ದಾರೆ. ಪ್ರತಿ ತಿಂಗಳ ಮೊದಲ ಹಾಗೂ ಮೂರನೇ ಶನಿವಾರ ಜಿಲ್ಲಾ ಉಸ್ತುವಾರಿ ಸಚಿವರುಗಳು ಕಡ್ಡಾಯವಾಗಿ ತಾಲೂಕು ಮತ್ತು ವಿಧಾನಸಭಾ ಕ್ಷೇತ್ರಗಳಿಗೆ ಭೇಟಿ ನೀಡಿ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ಹಳ್ಳಿಗಳಲ್ಲಿ ಕುಡಿಯುವ ನೀರಿನ ಕೊರತೆ ಉಂಟಾಗದಂತೆ ಕೊಳವೆಬಾವಿಗಳ ದುರಸ್ತಿಗೆ ಆದ್ಯತೆ ನೀಡಬೇಕು. ಹೊಸದಾಗಿ ಕೊಳವೆಬಾವಿ ಕೊರೆಯುವಾಗ ದುರುಪಯೋಗ ತಡೆಯಲು ಹಾಗೂ ಪಾರದರ್ಶಕತೆ ಕಾಯ್ದುಕೊಳ್ಳಲು 'ಜಿಪಿಎಸ್' ಟ್ರ್ಯಾಕಿಂಗ್ ಕಡ್ಡಾಯಗೊಳಿಸಲಾಗಿದೆ. ಶಾಸಕರು ಕೂಡ ಈ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಸೂಚಿಸಿದ್ದಾರೆ. ಪ್ರಮುಖವಾಗಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಹಾಗೂ ಸಾರ್ವಜನಿಕ ಆರೋಗ್ಯಕ್ಕೆ ಮೊದಲ ಆದ್ಯತೆ ನೀಡಬೇಕೆಂದು ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಮುಂದಿನ ವಾರ ಸಂಪುಟ ವಿಸ್ತರಣೆಯ ಸುಳಿವು ನೀಡಿದ ಮುಖ್ಯಮಂತ್ರಿಗಳು, ಬಳಿಕ ಎಲ್ಲಾ ಜಿಲ್ಲಾ ಉಸ್ತುವಾರಿ ಸಚಿವರು ಜನಪ್ರತಿನಿಧಿಗಳನ್ನು ಹಾಗೂ ಸಾರ್ವಜನಿಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಪ್ರವಾಸ ಕೈಗೊಳ್ಳುವಂತೆ ನಿರ್ದೇಶನ ನೀಡಲಾಗಿದೆ ಎಂದು ಹೇಳಿದ್ದಾರೆ. ಬೆಂಗಳೂರು ವಿಭಾಗದ ಸಭೆಗಳನ್ನು ರಾಜಧಾನಿಯಲ್ಲೇ ನಡೆಸಬಹುದಾಗಿದ್ದರೂ, ದಾವಣಗೆರೆ, ಶಿವಮೊಗ್ಗ, ಚಿತ್ರದುರ್ಗ ಹಾಗೂ ತುಮಕೂರು ಜಿಲ್ಲೆಗಳ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳಿಗೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಇಲ್ಲಿಗೆ ಬಂದು ಸಭೆ ನಡೆಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಬರ ಪರಿಸ್ಥಿತಿಯಿಂದ ರಾಜ್ಯದಲ್ಲಿ ಗಂಭೀರ ಪರಿಸ್ಥಿತಿ ಎದುರಾಗಿದ್ದು, ರಾಷ್ಟ್ರೀಯ ವಿಪತ್ತು ಎಂದು ಘೋಷಿಸಲು ಕೇಂದ್ರ ಸರ್ಕಾರವನ್ನು ಕೋರಲಾಗಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಚಿತ್ರದುರ್ಗದಲ್ಲಿಂದು ಬರ ಪರಿಶೀಲನೆ ಬಳಿಕ ಮಾತನಾಡಿದ ಅವರು, ಸೂಪರ್ ಎಲ್‌ನಿನೋ ಪರಿಣಾಮದಿಂದ ರಾಜ್ಯದ ಬಹಳಷ್ಟು ಜಲಾಶಯಗಳು ಡೆಡ್ ಸ್ಟೋರೇಜ್ ತಲುಪಿವೆ. ಬೆಂಗಳೂರು ವಿಭಾಗದ ಜಿಲ್ಲೆಗಳಲ್ಲಿ ಶೇಕಡ ೩೭ ಮಳೆಯಾಗಿದೆ ಎಂದು ಹೇಳಿದ್ದಾರೆ. ಬೆಂಗಳೂರು ವಿಭಾಗದ ಜಿಲ್ಲೆಗಳಲ್ಲಿ ಒಟ್ಟು ೧೩.೭೩ ಲಕ್ಷ ಹೆಕ್ಟೇರ್

ಬಿತ್ತನೆಯಾಗಬೇಕಿತ್ತು. ಆದರೆ ಮಳೆಯಾಗದ ಕಾರಣ ಕೇವಲ ೧.೭೪ ಲಕ್ಷ ಹೆಕ್ಟೇರ್ ನಷ್ಟು ಮಾತ್ರ ಬಿತ್ತನೆಯಾಗಿರುವುದು, ರಾಜ್ಯದಲ್ಲಿ ಭೀಕರ ಬರ ಪರಿಸ್ಥಿತಿಯನ್ನು ಬಿಂಬಿಸುತ್ತದೆ. ರಾಜ್ಯದ ಕೆರೆಗಳಲ್ಲಿಯೂ ಅಂತರ್ಜಲ ಕುಸಿದಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಆಯಾ ಶಾಸಕರು ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಟಾಸ್ಕ್ ಫೋರ್ಸ್ ಸಭೆ ನಡೆಸಿ, ಪರಿಸ್ಥಿತಿಯ ಪರಾಮರ್ಶೆ ನಡೆಸಿ ಜನರಿಗೆ ಯಾವುದೇ ಕಾರಣಕ್ಕೂ ಕುಡಿಯುವ ನೀರು ಪೂರೈಕೆಯಲ್ಲಿ ತೊಂದರೆ ಆಗದಂತೆ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದ್ದಾರೆ.

<><*<><>*><>

ನ್ಯಾನೊ ತಂತ್ರಜ್ಞಾನಕ್ಕೆ ಸಂಬಂಧಿಸಿದಂತೆ ದೇಶದ ಅತಿದೊಡ್ಡ ಹಾಗೂ ಸಮಗ್ರ ಸ್ವರೂಪದ ಅಂತಾರಾಷ್ಟ್ರೀಯ ಸಮ್ಮೇಳನ ಮತ್ತು ವಸ್ತು ಪ್ರದರ್ಶನವಾಗಿರುವ ಬೆಂಗಳೂರು, ಇಂಡಿಯಾ, ನ್ಯಾನೊ ಸಮಾವೇಶದ ೧೪ನೇ ಆವೃತ್ತಿಯು ಆಗಸ್ಟ್ ೩ ರಿಂದ ೫ರವರೆಗೆ ಬೆಂಗಳೂರಿನಲ್ಲಿ ನಡೆಯಲಿದೆ. ವಿಧಾನಸೌಧದಲ್ಲಿ ನಡೆದ ಸಮಾವೇಶದ ಪೂರ್ವಭಾವಿ ಕಾರ್ಯಕ್ರಮದಲ್ಲಿ ಮಾತನಾಡಿದ ವಿದ್ಯುನ್ಮಾನ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ, ನ್ಯಾನೊ ತಂತ್ರಜ್ಞಾನದ ಸಂಶೋಧನೆ ಹಾಗೂ ವಾಣಿಜ್ಯೀಕರಣದ ಅತ್ಯಂತ ಭರವಸೆಯ ಮೂರು ಪ್ರಮುಖ ಕ್ಷೇತ್ರಗಳಾದ ಸಮಿಕಂಡಕ್ಟರ್, ಕೃಷಿ ಮತ್ತು ಆರೋಗ್ಯ, ಇಂಧನ ಮತ್ತು ಪರಿಸರ ಕ್ಷೇತ್ರಗಳಲ್ಲಿ ನ್ಯಾನೊ ತಂತ್ರಜ್ಞಾನ ಎಂಬ ವಿಷಯಗಳ ಮೇಲೆ ಗಮನ ಹರಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಈ ಸಮಾವೇಶವು, ನ್ಯಾನೊ ವಿಜ್ಞಾನವನ್ನು ಉತ್ತೇಜಿಸಿ ಸಂಶೋಧನೆಗಳನ್ನು ವಾಸ್ತವ ಜಗತ್ತಿನಲ್ಲಿ ಉಪಯೋಗವಾಗುವ ತಂತ್ರಜ್ಞಾನಗಳಾಗಿ ರೂಪಿಸುವ ದೇಶದ ಅತ್ಯಂತ ಮಹತ್ವದ ವೇದಿಕೆಗಳಲ್ಲಿ ಒಂದಾಗಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಯುವ ಸಂಶೋಧಕರು ಹಾಗೂ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವುದು ಈ ಸಮಾವೇಶದ ಪ್ರಮುಖ ಆದ್ಯತೆಯಾಗಿದೆ ಎಂದು ತಿಳಿಸಿದ್ದಾರೆ. ಸಮಾವೇಶದಲ್ಲಿ ೨೬ಕ್ಕೂ ಹೆಚ್ಚು ಸಭೆಗಳು ಒಂದು ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

<><*<><>*><>

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರಿಗೆ ಅವರು ರಾಜೀನಾಮೆ ಪತ್ರ ಸಲ್ಲಿಸಿದ್ದಾರೆ. ಕಳೆದ ೧೦ ದಿನಗಳಿಂದ ವಿದ್ಯಾರ್ಥಿಗಳ ಪ್ರತಿಭಟನೆಯಿಂದ ತಮಗೆ ನೋವಾಗಿದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನ್ ತಿಳಿಸಿದ್ದಾರೆ. ಇದು ತಮಗೆ ಪ್ರತಿಷ್ಠೆಯ ವಿಷಯವಲ್ಲ ಎಂದು ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರ ಮಾರ್ಗದರ್ಶನ, ನಂಬಿಕೆ ಮತ್ತು ನಿರಂತರ ಬೆಂಬಲಕ್ಕಾಗಿ ಕೃತಜ್ಞತೆ ಸಲ್ಲಿಸಿದ್ದಾರೆ. ದೇಶವು ಒಗ್ಗಟ್ಟಿನಿಂದ ಇರಬೇಕು, ದೇಶದ ವಿದ್ಯಾರ್ಥಿಗಳು ಕಾನೂನು ಸಂಕಷ್ಟದಲ್ಲಿ ಸಿಲುಕಿಕೊಳ್ಳದೇ ತಮ್ಮ ಅಧ್ಯಯನ ಮತ್ತು ವೃತ್ತಿಜೀವನದ ಮೇಲೆ ಗಮನ ಹರಿಸಬೇಕು ಎಂಬ ಕಾರಣಕ್ಕಾಗಿ ಪ್ರಧಾನಿಯವರಿಗೆ ರಾಜೀನಾಮೆ ಸಲ್ಲಿಸಿರುವುದಾಗಿ ಸ್ಪಷ್ಟಪಡಿಸಿದ್ದಾರೆ.

<><*<><>*><>

ಕೊಡಗು ಜಿಲ್ಲೆಯ ಹಾರಂಗಿ ಜಲಾಶಯ ಭರ್ತಿಯಾದ ಹಿನ್ನೆಲೆಯಲ್ಲಿ ಇಂದು ೪ ಕ್ರಸ್ಟ್‌ಗೇಟ್‌ಗಳ ಮೂಲಕ ನದಿಗೆ ನೀರು ಹರಿಬಿಡಲಾಯಿತು. ವಾಡಿಕೆಯಂತೆ ಜಲಾಶಯದ ಕ್ರೆಸ್ಟ್‌ಗೇಟ್‌ಗಳಿಗೆ ಸಾಂಪ್ರದಾಯಿಕ ಪೂಜೆ ನೆರವೇರಿಸಿದ ಬಳಿಕ ನೀರು ಹರಿಸಲಾಯಿತು. ಕಾವೇರಿ ಜಲಾನಯನ ವ್ಯಾಪ್ತಿಯ ೪ ಪ್ರಮುಖ ಅಣೆಕಟ್ಟೆಗಳಾದ ಕಬಿನಿ, ಹೇಮಾವತಿ, ಕೆಆರ್‌ಎಸ್, ಹಾರಂಗಿ ಅಣೆಕಟ್ಟೆಗಳ ಪೈಕಿ ಮಳೆ ಕೊರತೆ ನಡುವೆಯೂ ಪ್ರಥಮವಾಗಿ ಭರ್ತಿಯಾದ ಹಾರಂಗಿಯಿಂದ ೪ ಸಾವಿರ ಕ್ಯೂಸೆಕ್ ನೀರು ನದಿಗೆ ಬಿಡಲಾಗಿದೆ. ಹಾರಂಗಿ ಜಲಾಶಯದಲ್ಲಿ ೨ ಸಾವಿರದ ೫೮೯ ಕ್ಯೂಸೆಕ್ ನೀರು ಶೇಖರಣಾ ಸಾಮರ್ಥ್ಯವಿದೆ.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ ’ಮನ್ ಕಿ ಬಾತ್’ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೬ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಹಾಗೂ ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಈ ಕಾರ್ಯಕ್ರಮವನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ

ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

**<><*<><>*><>**

ಬೆಂಗಳೂರಿನ ರಾಮೋಹಳ್ಳಿ ಗೇಟ್‌ನಲ್ಲಿಂದು ಕೆಂಗೇರಿ - ಹೆಜ್ಜಾಲ ರೈಲು ನಿಲ್ದಾಣಗಳ ನಡುವೆ ಲೆವೆಲ್ ಕ್ರಾಸಿಂಗ್ ಗೇಟ್-೧೬ರ ಬದಲಾಗಿ ನಿರ್ಮಿಸಿದ ನೂತನ ರಸ್ತೆ ಕೆಳ ಸೇತುವೆಯ ರಸ್ತೆಯನ್ನು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಲೋಕಾರ್ಪಣೆಗೊಳಿಸಿದರು. ಬಳಿಕ ಮಾತನಾಡಿದ ಅವರು, ಸುಗಮ ಸಂಚಾರಕ್ಕೆ ಅನುಕೂಲ ಕಲ್ಪಿಸುವ ಈ ಕೆಳಸೇತುವೆಯು ಈ ಭಾಗದ ಜನರ ಬಹುದಿನಗಳ ಬೇಡಿಕೆಯಾಗಿತ್ತು. ಶೇಕಡ ೧೦೦ರಷ್ಟು ಕೇಂದ್ರ ಸರ್ಕಾರದ ಅನುದಾನದಲ್ಲಿ ಈ ಕಾಮಗಾರಿಯನ್ನು ಕೈಗೆತ್ತಿಕೊಂಡು, ಕೇವಲ ೮ ತಿಂಗಳುಗಳಲ್ಲಿ ಪೂರ್ಣಗೊಳಿಸಿ, ಉದ್ಘಾಟನೆ ನೆರವೇರಿಸಲಾಗಿದೆ ಎಂದು ತಿಳಿಸಿದ್ದಾರೆ. ಕಾರ್ಯಕ್ರಮದಲ್ಲಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಸೇರಿದಂತೆ ಹಿರಿಯ ರೈಲ್ವೆ ಅಧಿಕಾರಿಗಳು ಉಪಸ್ಥಿತರಿದ್ದರು.

**<><*<><>*><>**

ಬೆಂಗಳೂರಿನ ಕೆ.ಆರ್.ಪುರಂನಿಂದ ಸೆಂಟ್ರಲ್ ಸಿಲ್ಕ್ ಬೋರ್ಡ್‌ವರೆಗಿನ ಹೊರ ವರ್ತುಲ ರಸ್ತೆಯನ್ನು ಆಮೂಲಾಗ್ರವಾಗಿ ಮೇಲ್ದರ್ಜೆಗೇರಿಸಲು ರಾಜ್ಯ ಸರ್ಕಾರ ೪೫೦ ಕೋಟಿ ರೂಪಾಯಿ ಅನುದಾನ ಮೀಸಲಿಟ್ಟಿದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಐಟಿ ಪಾರ್ಕ್ ಮಾಲೀಕರು ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸ್ಥಳೀಯರ ಜೊತೆ ಸಮಾಲೋಚನೆ ಸಭೆ ನಡೆಸಿದ ಬಳಿಕ ಮಾಧ್ಯಮ ಪ್ರಕಟಣೆ ಹೊರಡಿಸಿರುವ ಅವರು, ಜಂಕ್ಷನ್‌ಗಳಲ್ಲಿ ಉಂಟಾಗುತ್ತಿರುವ ಅಪಾರ ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ವೈಜ್ಞಾನಿಕ ಮಾದರಿಯ ಬದಲಾವಣೆಗಳನ್ನು ತರಲಾಗುತ್ತಿದೆ ಎಂದು ಹೇಳಿದ್ದಾರೆ. ಹೊರ ವರ್ತುಲ ರಸ್ತೆ ವ್ಯಾಪ್ತಿಯ ಐಟಿ ಕಂಪನಿಗಳು, ಟೆಕ್‌ಪಾರ್ಕ್‌ಗಳು ತಮ್ಮ ಅನುಭವ ಹಾಗೂ ಸಲಹೆಗಳನ್ನು ಸರ್ಕಾರದೊಂದಿಗೆ ಹಂಚಿಕೊಳ್ಳುವ ಮೂಲಕ ರಸ್ತೆ ಹಾಗೂ ಸಾರ್ವಜನಿಕ ಮೂಲಸೌಕರ್ಯ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಮನವಿ ಮಾಡಿದ್ದಾರೆ.

**<><*<><>*><>**

ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳು ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಿದ್ದು, ಇಲ್ಲಿನ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾಭ್ಯಾಸ ಮಾಡಲು ಇತರೆ ಜಿಲ್ಲೆಗಳಿಂದಲೂ ವಿದ್ಯಾರ್ಥಿಗಳು ಆಗಮಿಸುತ್ತಿದ್ದಾರೆ. ಆದರೆ ಇತ್ತೀಚಿನ ದಿನಗಳಲ್ಲಿ ಹವಾಮಾನ ಇಲಾಖೆಯು ವಾಸ್ತವಿಕ ಸ್ಥಿತಿಯನ್ನು ಅರಿಯದೆ ನೀಡುತ್ತಿರುವ ಅವೈಜ್ಞಾನಿಕ ವರದಿಗಳಿಂದ ಶೈಕ್ಷಣಿಕ ವಲಯಕ್ಕೆ ತೊಂದರೆಯಾಗುತ್ತಿದೆ ಎಂದು ವಿಧಾನಪರಿಷತ್ ಸದಸ್ಯ ಎಸ್.ಎಲ್.ಭೋಜೆಗೌಡ ಕಳವಳ ವ್ಯಕ್ತಪಡಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**